
# ಚಿತ್ತಶುದ್ಧಿ



❋ ಕನ್ನಡಿಯ ಮೇಲೆ ಧೂಳು ಕವಿದಿದ್ದರೆ ಮುಖ ಕಾಣಿಸದು. ಚಿತ್ತ ಶುದ್ಧವಿಲ್ಲದಿದ್ದರೆ ಸ್ವಸ್ವರೂಪದ ದರ್ಶನ ದೊರೆಯದು. ನೋಡಿ, ಎಲ್ಲಿ ಅವತಾರಪುರುಷ ಜನ್ಮವೆತ್ತುವನೊ ಅಲ್ಲಿ ಸರಳತೆ ತಾಂಡವವಾಡುತ್ತದೆ. ನಂದ, ದಶರಥ, ವಸುದೇವ — ಇವರೆಲ್ಲರೂ ಸರಳ ಜೀವಿಗಳೆ.

❋ ವೇದಾಂತ ಹೇಳುತ್ತದೆ, 'ಚಿತ್ತ ಪರಿಶುದ್ಧ ವಾಗಿಲ್ಲದೆ ಇದ್ದರೆ ಭಗವಂತನನ್ನು ಪಡೆಯ ಬೇಕು ಎಂಬ ಇಚ್ಛೆಯೆ ಬರದು' ಅಂತ. ಹಿಂದಿನ ಜನ್ಮದಲ್ಲಿಯೆ ಆಗಲಿ ಅಥವಾ ಈ ಜನ್ಮ ದಲ್ಲಿಯೆ ಆಗಲಿ ವಿಶೇಷವಾಗಿ ತಪಸ್ಸು ಮಾಡ ದಿದ್ದರೆ ಸರಳತೆ, ಉದಾರತೆ ಉಂಟಾಗದು.

❋ ಶುದ್ಧ ಆತ್ಮವೆ ನಮ್ಮ ಸ್ವಸ್ವರೂಪ. ಯಾವುದಕ್ಕೆ ಜ್ಞಾನ ಎಂದು ಹೆಸರು? ಈ ಸ್ವಸ್ವರೂಪವನ್ನು ಅರಿತುಕೊಳ್ಳುವುದು ಮತ್ತು ಅದ ರಲ್ಲಿಯೆ ಮನಸ್ಸನ್ನಿಡುವುದು, ಈ ಶುದ್ಧ ಆತ್ಮವನ್ನು ಅರಿತು ಕೊಳ್ಳುವುದು.

❋ ಎಲ್ಲಿಯವರೆಗೆ ನೀನು ಮಾಯೆಯ ಮನೆಯೊಳಗೆ ಇರು ವೆಯೊ, ಎಲ್ಲಿಯವರೆಗೆ ಮಾಯೆಯ ಮೋಡ ಮೇಲೆ ಕವಿದು ಕೊಂಡಿರುತ್ತದೆಯೋ, ಅಲ್ಲಿಯವರೆಗೆ ಜ್ಞಾನಸೂರ್ಯನ ಪ್ರಭಾವ ಗೊತ್ತಾಗದು. ಮಾಯೆಯ ಗೃಹವನ್ನು ತ್ಯಜಿಸಿ (ಕಾಮಕಾಂಚನ ತ್ಯಜಿಸಿ) ಹೊರಗಡೆ ಬಂದು ನಿಂತುಕೊಂಡರೆ ಆಗ ಜ್ಞಾನಸೂರ್ಯ ಅವಿದ್ಯೆಯನ್ನು ನಾಶ ಮಾಡುತ್ತಾನೆ. ಮನೆಯ ಒಳಗೆ ನಿಂತರೆ ಲೆನ್ಸು ಕಾಗದವನ್ನು ಸುಡಲಾರದು. ಮನೆಯಿಂದ ಹೊರಗೆ ಬಂದು ನಿಂತರೆ ಬಿಸಿಲು ಲೆನ್ಸಿನ ಮೇಲೆ ಬೀಳುತ್ತದೆ, — ಆಗ ಕಾಗದ ಸುಟ್ಟುಹೋಗುತ್ತದೆ. ಮತ್ತೆ ಆಕಾಶ ಮೋಡದಿಂದ ಕೂಡಿದ್ದರೆ ಲೆನ್ಸು ಕಾಗದವನ್ನು ಸುಡಲಾರದು. ಮೇಘ ಚದುರಿ ಹೋದರೆ ಆಗ ಅದು ಸುಟ್ಟು ಹೋಗುತ್ತದೆ.

❋ ಕಾಮಕಾಂಚನದ ಮನೆಯನ್ನು ಬಿಟ್ಟು ಸ್ವಲ್ಪ ಹೊರಗೆ ನಿಂತರೆ — ಹೊರಗೆ ನಿಂತು ಸ್ವಲ್ಪ ಸಾಧನೆ ತಪಸ್ಸುಮಾಡಿದರೆ, ಆಗ ಮನಸ್ಸಿನ ಅಂಧಕಾರ ನಾಶವಾಗುತ್ತದೆ, ಅಹಂಕಾರವೆಂಬ ಅವಿದ್ಯಾ ಮೋಡ ಸುಟ್ಟು ಭಸ್ಮವಾಗುತ್ತದೆ; ಜ್ಞಾನ ಪ್ರಾಪ್ತಿಯಾಗುತ್ತದೆ. ಕಾಮ, ಕಾಂಚನವೇ ಆ ಮೋಡ.

❋ ಮನುಷ್ಯ ಭಗವಚ್ಚಿಂತನೆಯನ್ನೇನೊ ಮಾಡುತ್ತಾನೆ, ಆದರೆ ಆತನ ಇರುವಿಕೆಯಲ್ಲಿ ಆತನಿಗೆ ವಿಶ್ವಾಸವಿಲ್ಲ; ಮತ್ತೆ ಮತ್ತೆ ಭಗವಂತನನ್ನು ಮರೆಯುತ್ತಾನೆ, ಮತ್ತೆ ಸಂಸಾರದಲ್ಲಿ ಆಸಕ್ತ ನಾಗುತ್ತಾನೆ. ಇದು ಆನೆಗೆ ಮೈ ತೊಳೆದ ಹಾಗೆ; ಅದು ಮತ್ತೆ ಧೂಳು ಮತ್ತು ಬೂದಿಯನ್ನು ಮೈಗೆ ಮೆತ್ತಿಕೊಂಡುಬಿಡುತ್ತದೆ. 'ಮನಸ್ಸೆಂಬುದು ಒಂದು ಮದಿಸಿದ ಆನೆ.' ಆದರೆ ಆನೆಗೆ ಮೈ ತೊಳೆದ ಒಡನೆಯೆ ಅದನ್ನು ತೆಗೆದುಕೊಂಡು ಲಾಯದಲ್ಲಿ ಕಟ್ಟಿಹಾಕಿದರೆ ಅದು ಮತ್ತೆ ಧೂಳು ಮತ್ತು ಬೂದಿಯನ್ನು ಮೈಗೆ ಬಳಿದುಕೊಳ್ಳಲಾರದು.

❋ ಮನುಷ್ಯ ಮೃತ್ಯುಶಯ್ಯೆಯಲ್ಲಿ ಭಗ ವಂತನ ಚಿಂತನೆ ಮಾಡಿದರೆ ಆತನ ಮನಸ್ಸು ಶುದ್ಧವಾಗುತ್ತದೆ. ಬಳಿಕ ಆ ಮನಸ್ಸಿಗೆ ಮತ್ತೆ ಕಾಮಕಾಂಚನದಲ್ಲಿ ಆಸಕ್ತವಾಗಲು ಅವಕಾಶ ದೊರೆಯದು.

❋ ಮನುಷ್ಯನಿಗೆ ಭಗವಂತನಲ್ಲಿ ವಿಶ್ವಾಸವಿಲ್ಲ; ಅದಕ್ಕಾಗಿಯೆ ಆತ ಅಷ್ಟೊಂದು ದುಃಖವನ್ನು ಅನುಭವಿಸುವುದು. ಜನ ಹೇಳುತ್ತಾರೆ, 'ಗಂಗಾಸ್ನಾನದ ಸಮಯದಲ್ಲಿ ಜನರ ಪಾಪ ಗಳೆಲ್ಲ ಅವರವರನ್ನು ಬಿಟ್ಟು ಗಂಗೆಯ ತೀರದಲ್ಲಿರುವ ಗಿಡಗಳ ಮೇಲೆ ಕುಳಿತುಕೊಂಡಿರುತ್ತವೆ. ಸ್ನಾನ ಮುಗಿಸಿ ದಡಕ್ಕೆ ಬರುವುದೇ ತಡ ಒಡನೆಯೆ ಅವು ನೆಗೆದು ಅವರವರ ಹೆಗಲನ್ನು ಹತ್ತಿ ಬಿಡುತ್ತವೆ' ಎಂದು. ದೇಹತ್ಯಾಗದ ಸಮಯದಲ್ಲಿ ಭಗವಂತನ ಚಿಂತನೆ ಬರಬೇಕಾದರೆ, ಬದುಕಿರುವಾಗಲೆ ಅದಕ್ಕೆ ತಕ್ಕ ಸಿದ್ಧತೆ ಗಳನ್ನು ಮಾಡಿಕೊಳ್ಳಬೇಕು. ಸಿದ್ಧತೆ – ಅಭ್ಯಾಸಯೋಗ, ಭಗವ ಚ್ಚಿಂತನೆಯ ಅಭ್ಯಾಸವನ್ನು ಮಾಡಿದ್ದರೆ ಜೀವನದ ಕೊನೆಯ ದಿನವೂ ಆತನ ಭಾವನೆ ಮನಸ್ಸಿನಲ್ಲಿ ಏಳುತ್ತದೆ.

❋ ವ್ಯಾಕುಲ ಹೃದಯದಿಂದ ಆತನಿಗೆ ಪ್ರಾರ್ಥನೆ ಸಲ್ಲಿಸು; ಆತನಿಗಾಗಿ ಅಳು. ಆಗ ಚಿತ್ತಶುದ್ಧಿ ಉಂಟಾಗುತ್ತದೆ. ನಿರ್ಮಲ ವಾದ ನೀರಿನಲ್ಲಿ ಸೂರ್ಯನ ಪ್ರತಿಬಿಂಬವನ್ನು ನೋಡಬಹುದು. ಭಕ್ತನ 'ನಾನು' ಎಂಬ ರೂಪಿನ ಕನ್ನಡಿಯಲ್ಲಿ ಸಗುಣಬ್ರಹ್ಮನ, ಆದ್ಯಾಶಕ್ತಿಯ ದರ್ಶನ ದೊರೆಯುತ್ತದೆ. ಆದರೆ ಕನ್ನಡಿಯನ್ನು ಬಹಳ ಚೆನ್ನಾಗಿ ಒರೆಸಬೇಕು. ಕೊಳೆ ಕುಳಿತಿದ್ದರೆ ಸರಿಯಾದ ಪ್ರತಿ ಬಿಂಬ ಬೀಳದು.

❋ ಆತ ಅಂತರ್ಯಾಮಿ, ಆತನಿಗೆ ಸರಳ ಮನಸ್ಸಿನಿಂದ, ಶುದ್ಧ ಮನಸ್ಸಿನಿಂದ ಪ್ರಾರ್ಥನೆ ಸಲ್ಲಿಸು. ಆತ ಎಲ್ಲವನ್ನೂ ತಿಳಿಸಿ ಕೊಡುತ್ತಾನೆ, ಅಹಂಕಾರವನ್ನು ತ್ಯಜಿಸಿ ಆತನಲ್ಲಿ ಶರಣಾಗತ ನಾಗು; ಎಲ್ಲಾ ದೊರೆಯುತ್ತದೆ.

❋ ವ್ಯಾಕುಲಚಿತ್ತದಿಂದ ಆತನನ್ನು ಪ್ರಾರ್ಥಿಸು. ವಿವೇಕ ಕ್ಕಾಗಿ ಆತನಿಗೆ ಪ್ರಾರ್ಥನೆ ಮಾಡಿಕೊ. 'ಭಗವಂತನೊಬ್ಬನೇ ಸತ್ಯ, ಉಳಿದುದೆಲ್ಲ ಅನಿತ್ಯ' — ವಿವೇಕ ಎಂಬುದು ಇದೇನೆ.

ಶ್ರೀರಾಮಕೃಷ್ಣ ವಚನವೇದದಿಂದ